**Akashvani : Bangalore**
**Regional Bulletin In Kannada**
**24.08.2024 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

**24.08.2024** **18.40 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ಆಹಾರ, ಆರೋಗ್ಯ ಕ್ಷೇತ್ರಗಳಲ್ಲಿ ಭಾರತ ಪ್ರಗತಿ- ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್**

**೨. ರಾಜ್ಯಪಾಲರ ಸಂವಿಧಾನಬಾಹಿರ ನಿರ್ಣಯದ ಬಗ್ಗೆ ವರಿಷ್ಠರಿಗೆ ವಿವರಣೆ- ಮುಖ್ಯಮಂತ್ರಿ ಸಿದ್ದರಾಮಯ್ಯ**

**೩. ಮುಡಾ ಹಗರಣ ಮರೆಮಾಚಲು ದೆಹಲಿಯಲ್ಲಿ ಶಾಸಕರ ಪರೇಡ್‌ಗೆ ಮುಖ್ಯಮಂತ್ರಿ ತಯಾರಿ- ಸಂಸದ ಬಸವರಾಜ ಬೊಮ್ಮಾಯಿ**

**೪. ವಿಶ್ವವಿಖ್ಯಾತ ಮೈಸೂರು ದಸರಾಗೆ ಭರದ ಸಿದ್ದತೆ; ನಾಳೆಯಿಂದ ಗಜಪಡೆಗೆ ತಾಲೀಮು**

**೫. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ನಾಳೆ ’ಮನ್ ಕಿ ಬಾತ್’ ಕಾರ್ಯಕ್ರಮ**

**<><*<><>*><>**

ಭಾರತೀಯ ಆಹಾರದಲ್ಲಿ ಪೌಷ್ಠಿಕಾಂಶವಿದ್ದು, ದೇಹ ಮತ್ತು ಮನಸ್ಸಿಗೆ ಸ್ಥಿರತೆ ನೀಡಲಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ. ರಾಜಭವನದಲ್ಲಿಂದು ಪೋಷನ್ ಉತ್ಸವ ಕಾಫಿಟೇಬಲ್ ಪುಸ್ತಕವನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಭಾರತೀಯರ ಆರೋಗ್ಯ ನಮ್ಮ ಸಾಂಪ್ರದಾಯಿಕ ಆಹಾರದ ಅಮೃತ ರೂಪದಲ್ಲಿ ಅಡಗಿದೆ. ಸಾಮಾಜಿಕ ಅಂಶಗಳು ಅಂತರ್ಗತವಾಗಿವೆ ಎಂದು ತಿಳಿಸಿದರು. ಅಭಿವೃದ್ಧಿ ಹೊಂದಿದ ರಾಷ್ಟ್ರದ ಅಡಿಪಾಯವು ಆಹಾರ ಧಾನ್ಯಗಳ ಸಮೃದ್ಧತೆ ಮತ್ತು ಅವುಗಳಲ್ಲಿರುವ ಪೌಷ್ಠಿಕಾಂಶದ ಮೇಲೆ ಅವಲಂಬಿತವಾಗಿರುತ್ತದೆ. ಆಹಾರ ಹಾಗೂ ಆರೋಗ್ಯ ಕ್ಷೇತ್ರಗಳ ಅಭಿವೃದ್ಧಿಯಲ್ಲಿ ಭಾರತ ವೇಗವಾಗಿ ಮುಂಚೂಣಿಯತ್ತ ಸಾಗುತ್ತಿದೆ ಎಂದರು. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಭಾರತೀಯ ಹಳೆಯ ಆಹಾರ ಪದ್ಧತಿಯು ಉತ್ತಮ ಆರೋಗ್ಯ ಕಾಪಾಡುವಂತಿತ್ತು. ಆಹಾರದಿಂದಲೇ ವಿವಿಧ ರೋಗಗಳನ್ನು

ಗುಣಪಡಿಸಲಾಗುತ್ತಿತ್ತು. ಪ್ರಸ್ತುತ ಆಹಾರ ಪದ್ಧತಿ ಬದಲಾವಣೆಗೊಂಡ ಪರಿಣಾಮ ಅನಾರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದು ಹೇಳಿದರು.

**<><*<><>*><>**

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರ ಹಾಗೂ ವಿಪಕ್ಷಗಳ ನಡೆ ಮತ್ತು ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಬಗ್ಗೆ ಪಕ್ಷದ ವರಿಷ್ಠರೊಂದಿಗೆ ಚರ್ಚೆ ನಡೆಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಬೆಂಗಳೂರಿನ ಗಾಂಧಿಭವನದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಬಗ್ಗೆ ಪಕ್ಷದ ವರಿಷ್ಠರಿಗೆ ವಿವರಿಸಲಾಗಿದೆ. ವಿಪಕ್ಷಗಳು ಮುಡಾ ಪ್ರಕರಣಕ್ಕೆ ಪಾದಯಾತ್ರೆ ಮಾಡಿದ್ದು, ಅದನ್ನು ರಾಜಕೀಯವಾಗಿ ಎದುರಿಸುವ ಬಗ್ಗೆ ಚರ್ಚಿಸಲಾಗಿದೆ. ರಾಜ್ಯಪಾಲರು ಕೊಟ್ಟಿರುವ ಅನುಮತಿ ಕಾನೂನುಬಾಹಿರ ಮತ್ತು ಸಂವಿಧಾನ ಬಾಹಿರವಾಗಿದೆ ಎಂದು ವರಿಷ್ಠರಿಗೆ ತಿಳಿಸಲಾಗಿದೆ ಎಂದರು. ಸರ್ಕಾರ ಸಲ್ಲಿಸಿದ ಬಿಲ್ ಗಳನ್ನು ರಾಜ್ಯಪಾಲರು ವಾಪಸ್ಸು ಕಳುಹಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ರಾಜ್ಯಪಾಲರು ಆರು ಮಸೂದೆಗಳನ್ನು ವಾಪಸ್ಸು ಕಳುಹಿಸಿದ್ದು, ಈ ಬಗ್ಗೆ ಮತ್ತೊಮ್ಮೆ ಸಚಿವ ಸಂಪುಟದಲ್ಲಿ ಚರ್ಚಿಸಲಾಗುವುದು. ರಾಜ್ಯಪಾಲರಿಗೆ ಸಲ್ಲಿಸಲಾಗಿದ್ದ ಮಸೂದೆಗಳು, ವಿಧಾನಸಭೆ ಹಾಗೂ ವಿಧಾನಪರಿಷತ್ತಿನಲ್ಲಿ ಅಂಗೀಕೃತಗೊಂಡಿದ್ದರಿಂದ, ಈ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದು ಹೇಳಿದರು.

**<><*<><>*><>**

ಮುಡಾ ಹಗರಣ ಮರೆಮಾಚಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ದೆಹಲಿಯಲ್ಲಿ ಶಾಸಕರ ಪೇರೇಡ್ ಮಾಡಲು ತಯಾರಿ ಮಾಡುತ್ತಿದ್ದು, ದೆಹಲಿಯಲ್ಲಿ ಏನೇ ಪೆರೇಡ್ ಮಾಡಿದರೂ ಈಗಾಗಲೇ ಕಾನೂನು ಹೋರಾಟ ಆರಂಭವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಹುಬ್ಬಳ್ಳಿಯಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಡಾ ಹಗರಣದ ಚೆಂಡು ಕಾನೂನು ಅಂಗಳಕ್ಕೆ ಹೋಗಿದ್ದು, ಕಾನೂನಿನ ಮೂಲಕವೇ ಇದು ಇತ್ಯರ್ಥ ಆಗಬೇಕು; ನ್ಯಾಯಾಲಯದ ತೀರ್ಮಾನದ ನಂತರ ಮುಂದಿನ ಹೋರಾಟ ನಡೆಸಲಾಗುವುದು. ಆದರೆ, ಮುಖ್ಯಮಂತ್ರಿಗಳು ತಮ್ಮ ಸ್ಥಾನ ಉಳಿಸಿಕೊಳ್ಳಲು ರಾಜಕೀಯ ತಂತ್ರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ರಾಜ್ಯಪಾಲರು ಮಸೂದೆಗಳನ್ನು ವಾಪಸ್ ಕಳುಹಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಬೊಮ್ಮಾಯಿ ರಾಜ್ಯಪಾಲರು ಯಾವುದೇ ಮಸೂದೆಗೆ ವಿರೋಧ ವ್ಯಕ್ತಪಡಿಸಿಲ್ಲ, ಪ್ರತಿಯೊಂದು ಮಸೂದೆಗೆ ಪ್ರಶ್ನೆ ಕೇಳಿದ್ದು, ಸಾರ್ವಜನಿಕ ಹಿತಾಸಕ್ತಿ ವಿರುದ್ಧವಾದ ಮಸೂದೆಗಳಿಗೆ ಉತ್ತರ ಕೊಡಲು ಸರ್ಕಾರಕ್ಕೆ ಕೇಳಿದ್ದಾರೆಂದು ಬಸವರಾಜ ಬೊಮ್ಮಾಯಿ ಹೇಳಿದರು.

**<><*<><>*><>**

ಕೇಂದ್ರ ಸರ್ಕಾರ, ರಾಜ್ಯ ಸರ್ಕಾರದ ಮನವಿಗೆ ಸ್ಪಂದಿಸಿ, ಬೆಂಬಲ ಬೆಲೆ ಯೋಜನೆಯ ಹೆಸರುಕಾಳು ಮತ್ತು ಸೂರ್ಯಕಾಂತಿ ಖರೀದಿಗೆ ಸಮ್ಮತಿಸಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಮಾರುಕಟ್ಟೆಯಲ್ಲಿ ಹೆಸರುಕಾಳು ಮತ್ತು ಸೂರ್ಯಕಾಂತಿ ಧಾರಣೆ ಕುಸಿದ ಕಾರಣ ಬೆಂಬಲ ಬೆಲೆ ಯೋಜನೆಯಲ್ಲಿ ಖರೀದಿಗೆ

ಅನುಮತಿ ನೀಡುವಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ೨೨ ಸಾವಿರದ ೨೧೫ ಮೆಟ್ರಿಕ್ ಟನ್ ಹೆಸರುಕಾಳು ಹಾಗೂ ೧೩ ಸಾವಿರದ ೨೧೦ ಮೆಟ್ರಿಕ್ ಟನ್ ಸೂರ್ಯಕಾಂತಿ ಖರೀದಿಗೆ ಕೇಂದ್ರ ಸರ್ಕಾರ ಸಮ್ಮತಿಸಿದೆ. ಬೆಂಬಲ ಬೆಲೆ ಯೋಜನೆಯಲ್ಲಿ ಎಫ್ ಎ ಕ್ಯೂ ಗುಣಮಟ್ಟದ ಹೆಸರುಕಾಳಿಗೆ ಪ್ರತಿ ಕ್ವಿಂಟಲ್ಗೆ ೮ ಸಾವಿರದ ೬೮೨ ರೂಪಾಯಿ ಹಾಗೂ ಸೂರ್ಯಕಾಂತಿಗೆ ೭ ಸಾವಿರದ ೨೮೦ ರೂಪಾಯಿ ಬೆಲೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರ ರಾಜ್ಯದ ಪ್ರಸ್ತಾವನೆಗೆ ಸಮ್ಮತಿಸಿರುವುದರಿಂದ ಖರೀದಿ ಏಜನ್ಸಿ ನೇಮಕ ಮಾಡಿ ಆದೇಶ ಹೊರಡಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ. ಹೀಗಾಗಿ ಧಾರಣೆ ಕುಸಿದಿದೆ ಎಂದು ರೈತರು ಆತಂಕ ಪಡುವ ಅಗತ್ಯವಿಲ್ಲ. ಖರೀದಿ ಕೇಂದ್ರಗಳನ್ನು ಆರಂಭಿಸುತ್ತಿದ್ದಂತೆ ನೋಂದಣಿ ಮಾಡಿಸಿಕೊಂಡು ಬೆಂಬಲ ಬೆಲೆಯಲ್ಲಿ ಮಾರಾಟ ಮಾಡಬಹುದು ಎಂದು ಸಚಿವರು ತಿಳಿಸಿದ್ದಾರೆ.

<><*<><>*><>

ರಾಜ್ಯ ಸರ್ಕಾರ ದುಡಿಯುವ ವರ್ಗದ ಏಳಿಗೆಗಾಗಿ ಅನೇಕ ಜನಪರ ಕಾರ್ಯಕ್ರಮಗಳನ್ನು ರೂಪಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಕಾಮ್ರೇಡ್ ಸೂರ್ಯನಾರಾಣರಾವ್ ಅವರ ಜನ್ಮ ಶತಮಾನೋತ್ಸವ ಅಂಗವಾಗಿ ಆಯೋಜಿಸಿದ್ದ "ಕರ್ನಾಟಕದ ಅಭಿವೃದ್ಧಿಯಲ್ಲಿ ಕಾರ್ಮಿಕ ಚಳವಳಿಯ ಪಾತ್ರ" ಕುರಿತ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡು ಮಾತನಾಡಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ನಿಧಿ ಅನುದಾನದಲ್ಲಿ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ, ಗುಣಮಟ್ಟದ ಶಿಕ್ಷಣ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಆಹಾರ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ.

<><*<><>*><>

ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾಗೆ ಭರದ ಸಿದ್ಧತೆ ನಡೆಯುತ್ತಿದ್ದು, ಈ ಬಾರಿಯ ದಸರಾದಲ್ಲಿ ಪಾಲ್ಗೊಳ್ಳಲು ಕಾಡಿನಿಂದ ಮೈಸೂರು ಅರಮನೆ ಪ್ರವೇಶ ಮಾಡಿರುವ ಗಜಪಡೆಗೆ ಇಂದು ಬೆಳಗ್ಗೆ ತೂಕ ಮತ್ತು ಆರೋಗ್ಯ ಪರೀಕ್ಷೆ ಮಾಡಲಾಯಿತು. ಮೈಸೂರಿನ ಧನ್ವಂತರಿ ರಸ್ತೆಯಲ್ಲಿರುವ ಸಾಯಿರಾಂ ತೂಕ ಮಾಪನ ಕೇಂದ್ರದಲ್ಲಿ ಜಂಬೂ ಸವಾರಿ ಹೊರುವ ಅಭಿಮನ್ಯು ನೇತೃತ್ವದಲ್ಲಿ ೯ ಆನೆಗಳಿಗೆ ತೂಕ ಪರೀಕ್ಷೆ ಮಾಡಲಾಗಿದ್ದು, ೫ ಸಾವಿರದ ೫೬೦ ಕೆಜಿ ತೂಕ ಇರುವ ಅಭಿಮನ್ಯು ಅತೀ ಹೆಚ್ಚು ತೂಕ ಹೊಂದಿರುವ ಆನೆಯಾಗಿದೆ. ಧನಂಜಯ ೫ ಸಾವಿರದ ೧೫೫ ಕೆಜಿ ತೂಕ ಹೊಂದಿದ್ದು, ಗೋಪಿ ೪ ಸಾವಿರದ ೯೭೦, ಭೀಮ ೪ ಸಾವಿರದ ೯೪೫, ಏಕಲವ್ಯ ೪ ಸಾವಿರದ ೭೩೦, ಕಂಜನ್ ೪ ಸಾವಿರದ ೫೧೫, ರೋಹಿತ್ ೩ ಸಾವಿರದ ೬೨೫, ವರಲಕ್ಷ್ಮಿ ೩ ಸಾವಿರದ ೪೯೫ ಹಾಗೂ ಲಕ್ಷ್ಮೀ ೨ ಸಾವಿರದ ೪೮೦ ಕೆ ಜಿ ತೂಕವನ್ನು ಹೊಂದಿದೆ. ಎಲ್ಲ ಆನೆಗಳು ಆರೋಗ್ಯ ಉತ್ತಮವಾಗಿದೆ. ಆನೆಗಳ ತೂಕದ ಆಧಾರದ ಮೇಲೆ ಪೌಷ್ಟಿಕ ಆಹಾರ ನೀಡಲಾಗುವುದುಹಾಗೂ ನಾಳೆಯಿಂದ ಆನೆಗಳಿಗೆ ತಾಲಿಮು ಪ್ರಾರಂಭವಾಗಲಿದೆ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಪ್ರಭುಗೌಡ ತಿಳಿಸಿದ್ದಾರೆ.

**<><*<><>*><>**

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ನಾಳೆ ಬೆಳಗ್ಗೆ ೧೧ ಗಂಟೆಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವನ್ನು ಆಕಾಶವಾಣಿ ಮತ್ತು ದೂರದರ್ಶನ, ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನ ಎಲ್ಲ ಜಾಲಗಳಲ್ಲಿ ಪ್ರಸಾರವಾಗಲಿದೆ. ಅಲ್ಲದೇ ಎಐಆರ್ ನ್ಯೂಸ್, ಡಿಡಿನ್ಯೂಸ್, ಪಿಎಂಒ ಮತ್ತು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾಲನ್‌ಗಳಲ್ಲಿ ನೇರ ಪ್ರಸಾರ ಭಿತ್ತರವಾಗಲಿದೆ. ಮನ್ ಕಿ ಬಾತ್ ಹಿಂದಿ ಅವತರಣಿಕೆಯ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

**<><*<><>*><>**

ಬೆಳಗಾವಿ ಜಿಲ್ಲೆಯ ಸರ್ಕಾರಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಲ್ಲಿರುವ ಸಿಇಟಿ ಮತ್ತು ನೀಟ್ ಪರೀಕ್ಷೆಯ ಭಯವನ್ನು ಹೋಗಲಾಡಿಸಿ, ಅವರಲ್ಲಿ ಆತ್ಮವಿಶ್ವಾಸವನ್ನು ಮೂಡಿಸಲು "ಸಿಇಟಿ-ಸಕ್ಷಮ್" ಎಂಬ ವಿನೂತನ ಯೋಜನೆಯನ್ನು ಜಿಲ್ಲೆಯಲ್ಲಿ ಜಾರಿಗೆ ತರಲಾಗಿದೆ. ಜಿಲ್ಲಾ ಪಂಚಾಯತಿಯು, ಪದವಿಪೂರ್ವ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಸಿಇಟಿ ಸಕ್ಷಮ್ ಮಾದರಿ ಪರೀಕ್ಷೆಯನ್ನು ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳ ವ್ಯಾಪ್ತಿಯ ೩೪ ಕಾಲೇಜುಗಳಲ್ಲಿ ನಡೆಸುತ್ತಿದೆ. ಈ ಪರೀಕ್ಷಾ ಪದ್ಧತಿಯನ್ನು ಸ್ವಂತ ಮುತುವರ್ಜಿಯಿಂದ ಜಾರಿಗೊಳಿಸಿದ ಬೆಳಗಾವಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ರಾಹುಲ್ ಶಿಂಧೆ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ- ರಾಹುಲ್ ಶಿಂಧೆ**

ಚಿಂತಮನರಾವ್ ಕಾಲೇಜಿನ ವಿದ್ಯಾರ್ಥಿನಿ ತನ್ವಿ ನಾರಾಯಣ ಮುದ್ದೆಬಿಹಾಳ, ಆರ್ಥಿಕವಾಗಿ ಹಿಂದುಳಿದ ನಮ್ಮಂಥ ಮಕ್ಕಳಿಗೆ ಹೆಚ್ಚು ತುಂಬಾ ಅನುಕೂಲವಾಗಿದೆ ಎಂದಿದ್ದಾರೆ.

**ಧ್ವನಿ- ತನ್ವಿ ನಾರಾಯಣ ಮುದ್ದೆಬಿಹಾಳ**

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**